**ಜಿಲ್ಲಾಧಿಕಾರಿಗಳ ಕಾರ್ಯಾಲಯ, ಬೆಂಗಳೂರು ಜಿಲ್ಲೆ, ಬೆಂಗಳೂರು**

ಸಂ:ಕೆ.ಎಸ್.ಎ:ಸಿಆರ್:110/10-11 ದಿನಾಂಕ: 8/6/2011.

:: **ಅಂತಿಮ ಅಧಿಸೂಚನೆ** ::

ಸಂ:ಕೆಎಸ್ಎ:ಸಿಆರ್:110/10-11 ದಿನಾಂಕ: 26/8/2010 ರ ಪ್ರಿಲಿಮಿನರಿ ಅಧಿಸೂಚನೆಯನ್ನು ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಿ, ಅದರಲ್ಲಿ ಸದರಿ ಅಧಿಸೂಚನೆಯ ಷೆಡ್ಯೂಲ್‌ನಲ್ಲಿರುವ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಬೊಮ್ಮನಹಳ್ಳಿ ವಲಯದ ವ್ಯಾಪ್ತಿಯಲ್ಲಿ ಬರುವ ಬೆಂಗಳೂರು ದಕ್ಷಿಣ ತಾಲ್ಲೂಕು, ಬೇಗೂರು ಹೋಬಳಿ, ಹೊಂಗಸಂದ್ರ ಗ್ರಾಮದ, ಸ.ನಂ. 44 ರಲ್ಲಿ 2-00 ಎಕರೆ/ಗುಂಟೆ ವಿಸ್ತೀರ್ಣದಲ್ಲಿರುವ ಹರಿಜನ ಕಾಲೋನಿ ಕೊಳಚೆ ಪ್ರದೇಶವನ್ನು ಕರ್ನಾಟಕ ಕೊಳಚೆ ಪ್ರದೇಶಗಳ ( ಅಭಿವೃದ್ಧಿ ಮತ್ತು ನಿರ್ಮೂಲನೆ) ಕಾಯ್ದೆ 1973 ರ ಸೆಕ್ಷನ್ 3 ರ ಅಡಿಯಲ್ಲಿ ಪ್ರಾರಂಭಿಕವಾಗಿ ಕೊಳಚೆ ಪ್ರದೇಶವೆಂದು ಘೋಷಿಸಿ, ಸಂಬಂಧಿಸಿದವರಿಂದ ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿತ್ತು.

ಆಯುಕ್ತರು, ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ, ಬೆಂಗಳೂರು ಇವರು ಪತ್ರದ ಸಂಖ್ಯೆ:ಕಕೊನಿಮ:ಕಂ;ಘೋ:2010-11/924 ದಿನಾಂಕ: 14/01/2011 ರ ಪತ್ರದಲ್ಲಿ ಸದರಿ ಪ್ರಿಲಿಮಿನರಿ ಅಧಿಸೂಚನೆ ರಾಜ್ಯ ಪತ್ರದಲ್ಲಿ ಪ್ರಕಟವಾಗಿದ್ದು, ಸಂಬಂಧಪಟ್ಟ ಭೂ ಮಾಲೀಕರಿಗೆ ಜಾರಿ ಮಾಡಲಾಗಿದೆಯೆಂದೂ, ಈ ಅಧಿಸೂಚನೆಯ ಬಗ್ಗೆ ಮಂಡಳಿಯಲ್ಲಿ ಈವರೆಗೂ ಯಾರಿಂದಲೂ ಆಕ್ಷೇಪಣೆಗಳು ಸ್ವೀಕೃತವಾಗಿರುವುದಿಲ್ಲವೆಂದೂ, ಸದರಿ ಜಾಗವು ಬಿ.ಬಿ.ಎಂ.ಪಿ. ಮಾಲೀಕತ್ವ ಹೊಂದಿರುವುದರಿಂದ ಈ ಪ್ರದೇಶವನ್ನು ಕರ್ನಾಟಕ ಕೊಳಚೆ ಪ್ರದೇಶಗಳ (ಅಭಿವೃದ್ಧಿ ಮತ್ತು ನಿರ್ಮೂಲನೆ) ಕಾಯ್ದೆ 1973 ರ ಸೆಕ್ಷನ್ 3 ರಡಿಯಲ್ಲಿ ಅಂತಿಮವಾಗಿ ಕೊಳಚೆ ಪ್ರದೇಶವೆಂದು ಘೋಷಿಸಿ ಅಧಿಸೂಚನೆ ಹೊರಡಿಸುವಂತೆ ಕೋರಿರುತ್ತಾರೆ.

ಪ್ರಶ್ನಿತ ಕೊಳಚೆ ಪ್ರದೇಶದಲ್ಲಿ ಹಿಂದಿನ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ಸ್ವಲ್ಪಮಟ್ಟಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿದ್ದರೂ ಸಹ ಈಗಲೂ ಇದು ಕೊಳಚೆ ಪ್ರದೇಶದ ಗುಣಲಕ್ಷಣಗಳನ್ನು ಹೊಂದಿದೆ. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ದಿನಾಂಕ: 16-1-2007 ರಿಂದ ಅಸ್ತಿತ್ವಕ್ಕೆ ಬಂದಿರುವ ಹಿನ್ನೆಲೆಯಲ್ಲಿ ಸದರಿ ಕೊಳಚೆ ಪ್ರದೇಶದಲ್ಲಿನ ನಿವಾಸಿಗಳಿಗೆ ಹಕ್ಕು ಪತ್ರಗಳನ್ನು ನೀಡಲು ಸರ್ಕಾರ ತೀರ್ಮಾನಿಸಿರುವುದರಿಂದ ಈ ಪ್ರದೇಶವನ್ನು ಕರ್ನಾಟಕ ಕೊಳಚೆ ಪ್ರದೇಶಗಳ ( ಅಭಿವೃದ್ಧಿ ಮತ್ತು ನಿರ್ಮೂಲನೆ) ಕಾಯ್ದೆ 1973 ರಡಿಯಲ್ಲಿ ದತ್ತವಾಗಿರುವ ಅಧಿಕಾರದಂತೆ ಈ ಕೆಳಕಂಡ ಷೆಡ್ಯೂಲ್‌ನಲ್ಲಿ ನಮೂದಿಸಿರುವ ಪ್ರದೇಶವನ್ನು ಮೇಲ್ಕಂಡ ಕಾಯ್ದೆಯ ಸೆಕ್ಷನ್ 3 ರಡಿಯಲ್ಲಿ ಅಂತಿಮವಾಗಿ ಕೊಳಚೆ ಪ್ರದೇಶವೆಮದು ಘೋಷಿಸಿರುತ್ತೇನೆ.

---2.

Scanned with CamScanner

:: ಷೆಡ್ಯೂಲ್ ::

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಬೊಮ್ಮನಹಳ್ಳಿ ವಲಯದ ವ್ಯಾಪ್ತಿಯಲ್ಲಿ ಬರುವ ಬೆಂಗಳೂರು ದಕ್ಷಿಣ ತಾಲ್ಲೂಕು, ಬೇಗೂರು ಹೋಬಳಿ, ಹೊಂಗಸಂದ್ರ ಗ್ರಾಮದ ಬಂಡೆಪಾಳ್ಯ ಕೊಳಚೆ ಪ್ರದೇಶದ ಚಕ್ಕುಬಂದಿ ಮತ್ತು ಹದ್ದುಬಸ್ತು ತಃಖ್ತೆ.

| ಕ್ರ.ಸಂ. | ಕೊಳಚೆ ಪ್ರದೇಶದ ಹೆಸರು ಮತ್ತು ಸ್ಥಳ | ಕೊಳಚೆ ಪ್ರದೇಶದಲ್ಲಿರುವ ಜಮೀನಿನ ಮಾಲೀಕರ ಹೆಸರು | ಸರ್ವೆ ನಂ. | ವಿಸ್ತೀರ್ಣ ಎಕರೆ/ಗುಂಟೆ | ಚೆಕ್ಕುಬಂದಿಗಳು | | | |
|---|---|---|---|---|---|---|---|---|
| | | | | | ಪೂರ್ವ | ಪಶ್ಚಿಮ | ಉತ್ತರ | ದಕ್ಷಿಣ |
| 1. | ಬಂಡೆಪಾಳ್ಯ ಕೊಳಚೆ ಪ್ರದೇಶ, ಹೊಂಗಸಂದ್ರ ಗ್ರಾಮ, ಬೇಗೂರು ಹೋಬಳಿ, ಬೆಂಗಳೂರು ದಕ್ಷಿಣ ತಾಲ್ಲೂಕು | ಬಿ.ಬಿ.ಎಂ.ಪಿ | 44 | 2–00 | ಖಾಸಗಿ ಸ್ವತ್ತು | ರಸ್ತೆ | ಬಂಡೆ | ರಸ್ತೆ |

ಸಹಿ/–
(ಎಂ.ಕೆ.ಅಯ್ಯಪ್ಪ)
ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ, ಬೆಂಗಳೂರು.

ದಿ, ಕಂಟ್ರೈಲರ್, ಕರ್ನಾಟಕ ರಾಜ್ಯ ಪತ್ರ ಸರ್ಕಾರಿ ಹೊರವಲಯ ಮುದ್ರಣಾಲಯ, ಬೆಂಗಳೂರು–ಮೈಸೂರು ರಸ್ತೆ, ಕೆಂಗೇರಿ, ಬೆಂಗಳೂರು ಇವರಿಗೆ ಕಳುಹಿಸುತ್ತಾ, ಮೇಲ್ಕಂಡ ಅಧಿಸೂಚನೆಯನ್ನು ಮುಂದಿನ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸುವುದು ಹಾಗೂ ಪ್ರಕಟವಾದ ತಲಾ ಇಪ್ಪತ್ತೈದು ಪ್ರತಿಗಳನ್ನು (1) ಜಿಲ್ಲಾಧಿಕಾರಿಗಳು, ಬೆಂಗಳೂರು ಜಿಲ್ಲೆ, ಬೆಂಗಳೂರು ಮತ್ತು (2) ಆಯುಕ್ತರು, ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ, ಶೇಷಾದ್ರಿಪುರ, ಬೆಂಗಳೂರು–20 ರವರಿಗೆ ಕಳುಹಿಸಿಕೊಡಲು ಕೋರಿದೆ.


<u>ನಕಲನ್ನು ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಈ ಕೆಳಗಿನವರಿಗೆ ಕಳುಹಿಸಿದೆ.</u>

1) ಸರ್ಕಾರದ ಕಾರ್ಯದರ್ಶಿಗಳು, ವಸತಿ ಇಲಾಖೆ, ವಿಕಾಸಸೌಧ, ಬೆಂಗಳೂರು ರವರ ಅವಗಾಹನೆಗೆ ಸಲ್ಲಿಸಿದೆ.
2) ಆಯುಕ್ತರು, ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
3) ಆಯುಕ್ತರು, ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ, ಶೇಷಾದ್ರಿಪುರ, ಬೆಂಗಳೂರು–20
4) ತಹಶೀಲ್ದಾರ್, ಬೆಂಗಳೂರು ದಕ್ಷಿಣ ತಾಲ್ಲೂಕು ರವರಿಗೆ ಮಾಹಿತಿಗಾಗಿ,
5) ಹೆಚ್ಚಿನ ಪ್ರತಿಗಳು.

ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ, ಬೆಂಗಳೂರು.

ಜಿಲ್ಲಾಧಿಕಾರಿಗಳ ಕಾರ್ಯಾಲಯ ಬೆಂಗಳೂರು

Scanned with CamScanner




Scanned with CamScanner